ದಿನಾಂಕಃ 25–09–2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲುಃ** ಎದುರುದಾರರ ಪರ ವಕೀಲರಿಂದ,

1) ನನಗೆ ಕನ್ನಡ ಓದಲು ಬರೆಯಲು ಬರುವುದಿಲ್ಲ. ನನಗೆ ಅಸಲು ದಾವೆ ಸಂಖ್ಯೆ 341/2013 ದಾವೆಯ ಬಗ್ಗೆ ಮಾಹಿತಿ ಇರುತ್ತದೆ. ಸದರಿ ದಾವೆ ದಿನಾಂಕ 03.10.2017 ಡಿಕ್ರಿ ಆಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ನನ್ನ ಪತ್ನಿಗೆ ಅನಾರೋಗ್ಯ ಉಂಟಾಗಿದ್ದು ಮೈಸೂರಿನ ಆಸ್ಪತ್ರೆಯಲ್ಲಿ ಚಿಕತ್ಸೆ ಕೊಡಿಸಿರುತ್ತೇನೆ. ನನ್ನ ಪತ್ನಿಗೆ ಅನಾರೋಗ್ಯ ಇರುವ ಕಾರಣ ಮೇಲ್ಮನವಿಯನ್ನು ಕಾಲ ಪರಿಮಿತಿಯಲ್ಲಿ ಸಲ್ಲಿಸಿರುವುದಿಲ್ಲ. ನನ್ನ ಪತ್ನಿಗೆ ಗರ್ಭ ಕೋಶದ ಚಿಕಿತ್ಸೆ ಆಗಿರುತ್ತದೆ. ಚಿಕಿತ್ಸೆ ಕೊಡಿಸಿರುವ ಬಗ್ಗೆ ದಾಖಲೆಯನ್ನು ಹಾಜರುಪಡಿಸಿರುವುದಿಲ್ಲ. ಮತ್ತು ದಾಖಲೆಯನ್ನು ಹಾಜರುಪಡಿಸಲು ತೊಂದರೆ ಇರುವುದಿಲ್ಲ. ನಾನು ಸುಳ್ಳ ಪ್ರಮಾಣ ಪತ್ರ ಸಲ್ಲಿಸಿ ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ